ಉಡುಪಿ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ದ್ವಿತೀಯ ದರ್ಜೆ ಸಹಾಯಕರ ಹುದ್ದೆ

2449 - ಶ್ರೀ ಪಿ. ಬಸವರಾಜು (ಬ್ರಹ್ಮಾವರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯಗಳಲ್ಲಿ ಮೋಟಾರು ವಾಹನ ಇಲಾಖೆಯಲ್ಲಿನ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಯಲ್ಲಿ ವಿವಿಧ ವೃಂದಗಳ ಸಿಬ್ಬಂದಿಗಳ ಸಂಖ್ಯೆಗೆ ಪ್ರದೇಶಕ ಸಾರಿಗೆ ಕಛೇರಿಯ ವ್ಯಾಪ್ತಿಯಲ್ಲಿರುವ ವಾಹನಗಳ ಸಂಖ್ಯೆಗೆ ಅನುಗುಣವಾಗಿರುತ್ತದೆಯೇ? ಹಾಗಿಲ್ಲದಿದ್ದಲ್ಲಿ ಯಾವ ಮಾಪನದ ಮೇಲೆ ವಿವಿಧ ವೃಂದಗಳ ಸಿಬ್ಬಂದಿಗಳು ವಿವಿಧ ಪ್ರಾದೇಶಿಕ ಸಾರಿಗೆ ಕಛೇರಿಗಳಿಗೆ ವಿತರಿಸಲ್ಪಟ್ಟಿದ್ದಾರೆ?*

ಆ) *ಮಂಗಳೂರು ಕಛೇರಿಯ ವ್ಯಾಪ್ತಿಗೆ ಬರುವ ತಾಲ್ಲೂಕುಗಳ ಹಾಗು ವಾಹನಗಳ ಸಂಖ್ಯೆ ಎಷ್ಟು ಹಾಗೂ ಉಡುಪಿ ಪ್ರಾದೇಶಿಕ ಸಾರಿಗೆ ಕಚೇರಿಯ ವ್ಯಾಪ್ತಿಯಲ್ಲಿರುವ ತಾಲ್ಲೂಕುಗಳ ಹಾಗೂ ವಾಹನಗಳ ಸಂಖ್ಯೆ ಎಷ್ಟು?*

ಇ) *ಮಂಗಳೂರು ಸಾರಿಗೆ ಕಛೇರಿಯಲ್ಲಿರುವ ಪ್ರಥಮ ದರ್ಜೆ ಸಹಾಯಕರು ಮತ್ತು ದ್ವಿತೀಯ ದರ್ಜೆ ಸಹಾಯಕರ ಸಂಖ್ಯೆ ಎಷ್ಟು? ಅದೇ ರೀತಿ ಉಡುಪಿ ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿರುವ ಪ್ರಥಮ ದರ್ಜೆ ಮತ್ತು ದ್ವಿತೀಯ ದರ್ಜೆ ಸಹಾಯಕರ ಸಂಖ್ಯೆ ಎಷ್ಟು?*

ಈ) *ಉಡುಪಿ ಸಾರಿಗೆ ಕಛೇರಿಯಲ್ಲಿ ಪ್ರಥಮ ದರ್ಜೆ ಸಹಾಯಕರ ಮತ್ತು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳು ಕಡಿಮೆ ಸಂಖ್ಯೆಯಲ್ಲಿದ್ದು ಕೆಲಸದ ಒತ್ತಡ ಜಾಸ್ತಿ ಇರುವುದು, ಇವರಿಂದ ಸಾರ್ವಜನಿಕರಿಗೆ ಅನಾನುಕೂಲವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಈ ಹುದ್ದೆಗಳನ್ನು ಹೆಚ್ಚಿಸಲು ಸರ್ಕಾರದವರು ಕ್ರಮ ಕೈಗೊಳ್ಳಬಹುದೇ?*

ಶ್ರೀ ಅಜೀಜ್ ಸೇಠ್ (ಸಾರಿಗೆ ಸಚಿವರು) :

ಅ) ಹೌದು, ಆದಾಗ್ಯೂ ದಿನೇ ದಿನೇ ವಾಹನಗಳ ಸಂಖ್ಯೆ ಹೆಚ್ಚುತ್ತಿದ್ದು, ಸಿಬ್ಬಂದಿ ವರ್ಗದವರ ಕೊರತೆ ಕಂಡು ಬರುತ್ತಿದೆ.

ಆ)

	ಬೆಂಗಳೂರು	ಉಡುಪಿ
1) ವ್ಯಾಪ್ತಿಗೆ ಬರುವ ತಾಲ್ಲೂಕುಗಳ ಸಂಖ್ಯೆ	2	3
2 ವಾಹನಗಳ ಸಂಖ್ಯೆ	61,949	23,709
ಇ) 1) ಪ್ರಥಮ ದರ್ಜೆ ಸಹಾಯಕರು	15	05
2) ದ್ವಿತೀಯ ದರ್ಜೆ ಸಹಾಯಕರು	37	06

ಈ) ಹೌದು, ಇದನ್ನು ಪರಿಶೀಲಿಸಲಾಗುತ್ತಿದೆ.

ಬೆಂಗಳೂರು ಜಿಲ್ಲಾ ವ್ಯಾಪ್ತಿಯಲ್ಲಿರುವ ಗೃಹ ನಿರ್ಮಾಣ ಸಂಘಗಳ ಸಂಖ್ಯೆ

2294 - ಶ್ರೀ ಎಲ್.ಆರ್. ಶಿವರಾಮೇಗೌಡ (ನಾಗಮಂಗಲ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಂಗಳೂರು ನಗರ ಹಾಗೂ ಬೆಂಗಳೂರು ಜಿಲ್ಲಾ ವ್ಯಾಪ್ತಿಯಲ್ಲಿರುವ ಸಹಕಾರಿ ಗೃಹ ನಿರ್ಮಾಣ ಸಂಘಗಳ ಸಂಖ್ಯೆ ಎಷ್ಟು?*

ಆ) *ಮೇಲ್ಕಂಡ ಸಂಘಗಳಲ್ಲಿರುವ ನೊಂದಾಯಿತ ಸದಸ್ಯರ ಸಂಖ್ಯೆ ಎಷ್ಟು?*